**All India Radio: Bangalore**
**National Bulletin In Kannada**
**06.03.2025 19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**06.03.2025 19.35 p.m.**
********************

ಮುಖ್ಯಾಂಶಗಳು

೧. ಅಂತಾರಾಷ್ಟ್ರೀಯ ಮಹಿಳಾ ದಿನ; ಇದೇ ೮ ರಂದು ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು

೨. ನಾಳೆ, ದಾಖಲೆಯ ೧೬ನೇ ರಾಜ್ಯ ಆಯವ್ಯಯ ಮಂಡಿಸಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಈ ವರ್ಷ ದೇಶದ ಮೊದಲ ಸೆಮಿಕಂಡಕ್ಟರ್ ಚಿಪ್ ಚಾಲನೆಗೆ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೪. ಸಮಾಜದ ಉನ್ನತಿಗೆ ಮಹಿಳೆಯರು ಕೊಡುಗೆ ನೀಡುವಂತೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಸಲಹೆ

೫. ಮಹಿಳೆಯರ ಪ್ರೀಮಿಯರ್ ಲೀಗ್; ಯುಪಿ ವಾರಿಯರ್ಸ್-ಮುಂಬೈ ಇಂಡಿಯನ್ಸ್ ತಂಡಗಳ ಮುಖಾಮುಖಿ

****************

ಅಂತಾರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಮಾರ್ಚ್ ೮ರಂದು ನವದೆಹಲಿಯಲ್ಲಿ ನಡೆಯಲಿರುವ ರಾಷ್ಟ್ರೀಯ ಸಮ್ಮೇಳನವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಲಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯವು "ನಾರಿ ಶಕ್ತಿಯಿಂದ ವಿಕಸಿತ ಭಾರತ" ಎಂಬ ವಿಷಯದ ಮೇಲೆ ಈ ಸಮ್ಮೇಳನವನ್ನು ಆಯೋಜಿಸುತ್ತಿದೆ. "ಶೀಬಿಲ್ಡ್ಸ್ ಭಾರತ್" ಎಂಬ ಹ್ಯಾಶ್‌ಟ್ಯಾಗ್‌ನೊಂದಿಗೆ ಸಾಮಾಜಿಕ ಮಾಧ್ಯಮ ಅಭಿಯಾನವನ್ನು ಸಹ ಸಮ್ಮೇಳನದಲ್ಲಿ ಆರಂಭಿಸಲಾಗುತ್ತದೆ.

ಸಶಸ್ತ್ರ ಪಡೆಗಳು ಮತ್ತು ಅರೆಸೈನಿಕ ಪಡೆಗಳ ಅಧಿಕಾರಿಗಳು, ದೆಹಲಿ ಪೊಲೀಸರು, ಮೈ ಭಾರತ್ ಸ್ವಯಂಸೇವಕರು, ಅಂಗನವಾಡಿ ಕಾರ್ಯಕರ್ತರು, ಆಶಾ ಕಾರ್ಯಕರ್ತರು ಮತ್ತು ಸ್ವಸಹಾಯ ಗುಂಪಿನ ಸದಸ್ಯರು ಸೇರಿದಂತೆ ವಿವಿಧ ಕ್ಷೇತ್ರಗಳ ಮಹಿಳೆಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಈ ಕಾರ್ಯಕ್ರಮವು ವಿಶ್ವ ಬ್ಯಾಂಕ್, ಯುನಿಸೆಫ್, ವಿಶ್ವಸಂಸ್ಥೆ ಮಹಿಳೆಯರು, ಯುಎನ್‌ಡಿಪಿ ಮತ್ತು ಯುಎನ್‌ಎಫ್‌ಪಿಎ ಮುಂತಾದ ಅಂತರರಾಷ್ಟ್ರೀಯ ಸಂಸ್ಥೆಗಳ ಪ್ರತಿನಿಧಿಗಳ ಉಪಸ್ಥಿತಿಯನ್ನು ಸಹ ಗುರುತಿಸುತ್ತದೆ.

ಅಂತರಾಷ್ಟ್ರೀಯ ಮಹಿಳಾ ದಿನದ ಕುರಿತು ಮಾತನಾಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ, ಈ ದಿನವು ಮಹಿಳೆಯರ ಬಹುಮುಖಿ ಅಭಿವೃದ್ಧಿಯ ಬಗ್ಗೆ ಚರ್ಚಿಸಲು ಮತ್ತು ಅದನ್ನು ಸಾಧಿಸಲು ಇರುವ ಅಡೆತಡೆಗಳನ್ನು ತೆಗೆದುಹಾಕಲು ಅವಕಾಶವನ್ನು ಒದಗಿಸುತ್ತದೆ ಎಂದು ಹೇಳಿದರು.

****************

ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ಪ್ರತಿವರ್ಷ ಮಾರ್ಚ್ ೮ರಂದು ಆಚರಿಸಲಾಗುತ್ತದೆ. ಈ ದಿನವು, ರಾಷ್ಟ್ರೀಯ, ಜನಾಂಗೀಯ, ಭಾಷೆ, ಸಾಂಸ್ಕೃತಿಕ, ಆರ್ಥಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಮಹಿಳೆಯರ ಸಾಧನೆಗಳಿಂದ ಗುರುತಿಸಲ್ಪಡುತ್ತದೆ.

'ಎಲ್ಲಾ ಮಹಿಳೆಯರು ಮತ್ತು ಬಾಲಕಿಯರಿಗೆ: ಹಕ್ಕುಗಳು. ಸಮಾನತೆ. ಸಬಲೀಕರಣ', ಈ ಬಾರಿಯ ಅಂತಾರಾಷ್ಟ್ರೀಯ ಮಹಿಳಾ ದಿನದ ಧ್ಯೇಯ ವಾಕ್ಯವಾಗಿದೆ.

ಪ್ರಧಾನಿ ನರೇಂದ್ರ ಮೋದಿ, ಈ ಹಿಂದೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಗೆ ದೇಶಾದ್ಯಂತ ಮಹಿಳೆಯರು ತಮ್ಮ ಸ್ಪೂರ್ತಿದಾಯಕ ಜೀವನ ಪ್ರಯಾಣಗಳನ್ನು, ನಮೋ ಅಪ್ಲಿಕೇಶನ್‌ನ ಮುಕ್ತ ವೇದಿಕೆಯಲ್ಲಿ ಹಂಚಿಕೊಳ್ಳಲು ಪ್ರೋತ್ಸಾಹಿಸಿದ್ದರು.

ವಿಶೇಷ ಉಪಕ್ರಮವಾಗಿ, ಆಯ್ದ ಮಹಿಳೆಯರು, ಅವರ ಜೀವನಾನುಭವಗಳನ್ನು ಮಾರ್ಚ್ ೮ ರಂದು ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳಲ್ಲಿ ಹಂಚಿಕೊಳ್ಳಲಿದ್ದಾರೆ ಎಂದು ಪ್ರಧಾನಿ ಘೋಷಿಸಿದ್ದಾರೆ. ಇದರಿಂದ ಮಹಿಳೆಯರ ಕೊಡುಗೆಗಳನ್ನು ಸಂಭ್ರಮಿಸುವುದು, ಮಹಿಳಾ ಸಬಲೀಕರಣ, ಅವರ ಪರಿಶ್ರಮ ಮತ್ತು ಯಶಸ್ಸಿನ ಪ್ರಯಾಣವನ್ನು ಪ್ರದರ್ಶಿಸುವ ಮೂಲಕ ಇತರರಿಗೆ ಸ್ಪೂರ್ತಿ ನೀಡುವ  ಗುರಿಹೊಂದಿದೆ.

****************

ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ೨೦೨೫-೨೬ನೇ ಸಾಲಿನ ಕರ್ನಾಟಕ ರಾಜ್ಯ ಬಜೆಟ್ ಮಂಡಿಸಲಿದ್ದಾರೆ. ಇದು ಅವರು ಮಂಡಿಸುತ್ತಿರುವ ದಾಖಲೆಯ ೧೬ನೇ ಆಯವ್ಯಯವಾಗಿದೆ.

ನಾಳೆ ಬೆಳಗ್ಗೆ ೧೦ ಗಂಟೆ ೧೫ನಿಮಿಷಕ್ಕೆ ಅವರು ಬಜೆಟ್ ಮಂಡಿಸಲಿದ್ದು, ರಾಜ್ಯದ ಹಣಕಾಸು ಸಚಿವರಾಗಿ ಅತಿಹೆಚ್ಚು ಬಜೆಟ್ ಮಂಡಿಸಿದ ಕೀರ್ತಿಗೆ ಭಾಜನರಾಗಲಿದ್ದಾರೆ.

ಈ ಬಾರಿಯ ಬಜೆಟ್‌ನಲ್ಲಿ ಕೃಷಿ, ಆರೋಗ್ಯ, ಶಿಕ್ಷಣಕ್ಕೆ ಒತ್ತು ನೀಡಲಾಗುವುದು, ಪಕ್ಷಾತೀತವಾಗಿ ಸಮಾಜದ ಎಲ್ಲಾ ಜಾತಿ, ಜನಾಂಗ, ವರ್ಗದ ಜನರ ಆಶೋತ್ತರಗಳನ್ನು ಆಲಿಸಿ, ಅವುಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುವ ಪ್ರಯತ್ನವನ್ನು ಈ ಬಜೆಟ್ ಮೂಲಕ ಮಾಡಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

****************

ಉತ್ತರಾಖಂಡವನ್ನು ವರ್ಷಪೂರ್ತಿ ಪ್ರವಾಸೋದ್ಯಮ ತಾಣವನ್ನಾಗಿ ಮಾಡುವ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಒತ್ತು ನೀಡಿದ್ದಾರೆ.

ಉತ್ತರಕಾಶಿಯ ಹರ್ಸಿಲ್‌ನಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಉತ್ತರಾಖಂಡದಲ್ಲಿ ಚಳಿಗಾಲದ ಪ್ರವಾಸೋದ್ಯಮದ ಮಹತ್ವವನ್ನು ಎತ್ತಿ ತೋರಿಸಿದರು. ಉತ್ತರಾಖಂಡ ಇನ್ನು ಮುಂದೆ ಸದಾ ಋತುಕಾಲದಿಂದ ಕೂಡಿರಲಿದೆ, ಪ್ರವಾಸೋದ್ಯಮ ವರ್ಷವಿಡೀ ಅಭಿವೃದ್ಧಿ ಹೊಂದುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

ಈ ದಶಕವು ಉತ್ತರಾಖಂಡಕ್ಕೆ ಸೇರಿದ್ದು, ಇಲ್ಲಿ ಪ್ರಗತಿಗೆ ಹೊಸ ಮಾರ್ಗಗಳು ತೆರೆದುಕೊಳ್ಳುತ್ತಿವೆ ಎಂದರು. ಚಳಿಗಾಲದಲ್ಲಿ ಖಾಲಿ ಹೋಟೆಲ್‌ಗಳು ಮತ್ತು ಹೋಂ-ಸ್ಟೇಗಳಿಂದ ಉಂಟಾಗುವ ಆರ್ಥಿಕ ಅಸಮತೋಲನವನ್ನು ಎತ್ತಿ ತೋರಿಸಿದ ಅವರು, ಉತ್ತರಾಖಂಡದ ನಿಜವಾದ ಸೌಂದರ್ಯ ಉತ್ತುಂಗದಲ್ಲಿರುವ ಋತುವಿದು ಎಂದು ಹೊಗಳಿದರು.

ವರ್ಷದ ೩೬೫ ದಿನಗಳು ಪ್ರವಾಸೋದ್ಯಮವನ್ನು ಉತ್ತೇಜಿಸಲು, ರಾಜ್ಯದ ಪ್ರವಾಸೋದ್ಯಮವನ್ನು ಬಲಪಡಿಸುವುದರ ಜೊತೆಗೆ ಉತ್ತರಾಖಂಡದ ದೈವಿಕ ಮೋಡಿಯನ್ನು ಪ್ರವಾಸಿಗರು ಅನುಭವಿಸುವಂತಾಗಬೇಕು ಎಂದರು.

ಮೂಲಸೌಕರ್ಯ ಅಭಿವೃದ್ಧಿಯ ಬಗ್ಗೆ ಚರ್ಚಿಸುತ್ತಾ, ಪ್ರಧಾನಿಯವರು ಚಾರ್ ಧಾಮ್ ರಸ್ತೆ ಯೋಜನೆ, ರೈಲ್ವೆ ವಿಸ್ತರಣೆ, ವಾಯು ಸಂಪರ್ಕ ಮತ್ತು ರೋಪ್‌ವೇ ಯೋಜನೆಗಳನ್ನು ಉಲ್ಲೇಖಿಸಿದರು. ಗೌರಿಕುಂಡ್-ಕೇದಾರನಾಥ ಮತ್ತು ಗೋವಿಂದಘಾಟ್-ಹೇಮಕುಂಡ್ ರೋಪ್‌ವೇಗಳು ಯಾತ್ರಿಕರು ಮತ್ತು ಪ್ರವಾಸಿಗರಿಗೆ ಪ್ರಯಾಣವನ್ನು ಗಮನಾರ್ಹವಾಗಿ ಸುಗಮಗೊಳಿಸುತ್ತದೆ ಎಂದರು.

ಉತ್ತರಾಖಂಡ, ಡೆಸ್ಟಿನೇಶನ್ ವೆಡ್ಡಿಂಗ್‌ಗಳಿಗೆ ಸ್ಮರಣೀಯ ಆಚರಣೆಗಳಿಗೆ ಸೂಕ್ತ ಸ್ಥಳವಾಗಿದೆ ಎಂದು ಪ್ರಧಾನಿ ಉತ್ತೇಜಿಸಿದರು.

ಇದಕ್ಕೂ ಮೊದಲು, ಪ್ರಧಾನಿ ಮೋದಿ ಅವರು ಗಂಗಾ ದೇವಿಯ ಚಳಿಗಾಲದ ವಾಸಸ್ಥಾನವಾದ ಮುಖ್ವಾ ಗ್ರಾಮದಲ್ಲಿ ವಿಶೇಷ ಪೂಜೆ ಸಲ್ಲಿಸಿದರು, ಅಲ್ಲಿ ಸ್ಥಳೀಯರು ಜಾನಪದ ವಾದ್ಯಗಳೊಂದಿಗೆ ಅವರಿಗೆ ಭವ್ಯ ಸಾಂಪ್ರದಾಯಿಕ ಸ್ವಾಗತ ನೀಡಿದರು. ನಂತರ ಅವರು ಹರ್ಸಿಲ್ ವ್ಯೂಪಾಯಿಂಟ್‌ನಿಂದ ರಮಣೀಯ ಹಿಮಾಲಯನ್ ದೃಶ್ಯಗಳನ್ನು ವೀಕ್ಷಿಸಿ, ಟ್ರೆಕ್ಕಿಂಗ್ ಮತ್ತು ಬೈಕಿಂಗ್ ರ್‍ಯಾಲಿಗಳಿಗೆ ಚಾಲನೆ ನೀಡಿದರು. ದೆಹಲಿಗೆ ಹಿಂತಿರುಗುವ ಮೊದಲು ಡೆಹ್ರಾಡೂನ್‌ನ ಜಾಲಿ ಗ್ರಾಂಟ್ ವಿಮಾನ ನಿಲ್ದಾಣಕ್ಕೆ ಅವರು ತೆರಳಿದರು.

****************

ಹಾರ್ಡ್‌ವೇರ್ ಉತ್ಪಾದನೆಯಲ್ಲಿ ಭಾರತ ಆಮೂಲಾಗ್ರ ಪ್ರಗತಿ ಹೊಂದುತ್ತಿದ್ದು, ಈ ವರ್ಷ ದೇಶದ ಮೊದಲ ಸೆಮಿಕಂಡಕ್ಟರ್ ಚಿಪ್ ಚಾಲನೆಗೆ ಬರಲಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ರಾಷ್ಟ್ರೀಯ ದೈನಿಕವೊಂದರಲ್ಲಿ ಈ ಕುರಿತು ತಮ್ಮ ಲೇಖನದಲ್ಲಿ, ನಿರ್ಮಾಣ ಹಂತದಲ್ಲಿರುವ ಐದು ಸೆಮಿಕಂಡಕ್ಟರ್ ಘಟಕಗಳೊಂದಿಗೆ ಜಾಗತಿಕ ಎಲೆಕ್ಟ್ರಾನಿಕ್ಸ್ ವಲಯದಲ್ಲಿ ಭಾರತ ತನ್ನ ಸ್ಥಾನವನ್ನು ಸದೃಢಪಡಿಸಿಕೊಳ್ಳುತ್ತಿದೆ. ಪ್ರಸಕ್ತ ವರ್ಷ, ದೇಶದ ಮೊಟ್ಟಮೊದಲ ಮೇಕ್ ಇನ್ ಇಂಡಿಯಾ ಸೆಮಿಕಂಡಕ್ಟರ್ ಚಿಪ್ ಉತ್ಪಾದನೆಯೊಂದಿಗೆ ಹೊಸ ಮೈಲಿಗಲ್ಲು ನಿರ್ಮಾಣವಾಗಲಿದೆ ಎಂದು ತಿಳಿಸಿದ್ದಾರೆ.

ತಂತ್ರಜ್ಞಾನ ಮತ್ತು ಆವಿಷ್ಕಾರಗಳು ಇಂದು ಕೇವಲ ಪ್ರಯೋಗಾಲಯಗಳಿಗೆ ಸೀಮಿತವಾಗಿಲ್ಲ, ಜನ ಜೀವನದಲ್ಲಿ ಮಹತ್ತರ ಪರಿವರ್ತನೆಗೆ ಪೂರಕ ವಾತಾವರಣ ಕಲ್ಪಿಸಿವೆ. ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಕೃತಕ ಬುದ್ಧಿಮತ್ತೆ, ಸೆಮಿಕಂಡಕ್ಟರ್ ಮತ್ತು ಎಲೆಕ್ಟ್ರಾನಿಕ್ಸ್ ಉತ್ಪನ್ನಗಳ ತಯಾರಿಕೆಗೆ ಉತ್ತೇಜನ ನೀಡುವ ಮೂಲಕ ದೇಶದ ಡಿಜಿಟಲ್ ಭವಿಷ್ಯವನ್ನು ರೂಪಿಸಲಾಗುತ್ತಿದೆ ಎಂದು ಹೇಳಿದ್ದಾರೆ.

ಅಶ್ವಿನಿ ವೈಷ್ಣವ್ ಅವರು ಬರೆದ ಲೇಖನವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಶ್ಲಾಘಿಸಿದ್ದಾರೆ. ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಕೃತಕ ಬುದ್ಧಿಮತ್ತೆ, ಸೆಮಿಕಂಡಕ್ಟರ್ ಮತ್ತು ಎಲೆಕ್ಟ್ರಾನಿಕ್ಸ್ ಉತ್ಪಾದನೆಯ ಮೇಲೆ ಬಲವಾದ ಗಮನ ಹರಿಸುವ ಮೂಲಕ ದೇಶ ತನ್ನ ಡಿಜಿಟಲ್ ಭವಿಷ್ಯವನ್ನು ಹೇಗೆ ರೂಪಿಸುತ್ತಿದೆ ಎಂಬುದನ್ನು ಲೇಖನ ವಿವರಿಸುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು ತಿಳಿಸಿದ್ದಾರೆ.

****************

ಕೇಂದ್ರ ಸರ್ಕಾರವು ದೇಶದ ಅಲ್ಪಸಂಖ್ಯಾತ ಸಮುದಾಯಗಳ ಕಲ್ಯಾಣಕ್ಕೆ ಬದ್ಧವಾಗಿದ್ದು, ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡುತ್ತದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳು ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದರು.

ಕೇರಳದ ತಿರುವನಂತಪುರಂನಲ್ಲಿ ನಡೆದ ದಕ್ಷಿಣದ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ, ಪ್ರಧಾನ ಮಂತ್ರಿ ಜನ ವಿಕಾಸ್ ಕಾರ್ಯಕ್ರಮ ಕುರಿತ ಪ್ರಾದೇಶಿಕ ಪರಿಶೀಲನಾ ಸಭೆ ಮತ್ತು ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ರಾಷ್ಟ್ರೀಯ ಅಲ್ಪಸಂಖ್ಯಾತರ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಕೇರಳ ಸರ್ಕಾರವು ಕ್ರಿಯಾಶೀಲವಾಗಿ ಸ್ಪಂದಿಸುತ್ತಿದೆ ಎಂದು ಸಚಿವರು ಹೇಳಿದರು.

****************

ಪ್ರಗತಿಪರ ಸಮಾಜವನ್ನು ನಿರ್ಮಿಸಬೇಕಾದರೆ ನಾಗರಿಕರು ಅಸ್ಪೃಶ್ಯತೆ, ಜಾತಿ ಆಧಾರಿತ ತಾರತಮ್ಯ ಮತ್ತು ಅಸಮಾನತೆಗಳಿಂದ ತಮ್ಮನ್ನು ಮುಕ್ತಗೊಳಿಸಿಕೊಳ್ಳಬೇಕು ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಇಂದು ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ಲೋಕಮಾತಾ ಅಹಲ್ಯಾಬಾಯಿ ಹೋಳ್ಕರ್ ಮಹಿಳಾ ಸಮ್ಮಾನ್ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ಗಡ್ಕರಿ, ಯಾರನ್ನೂ ಮೇಲು-ಕೀಳು ಎಂದು ಪರಿಗಣಿಸಲಾಗುವುದಿಲ್ಲ, ಸಮಾನತೆಯ ಆಧಾರದ ಮೇಲೆ ಸಮಾಜವನ್ನು ರಚಿಸುವುದು ನಮ್ಮ ಗುರಿಯಾಗಿದೆ ಎಂದು ಒತ್ತಿ ಹೇಳಿದರು.

ಪ್ರತಿಯೊಬ್ಬ ವ್ಯಕ್ತಿಯ ಮೌಲ್ಯವನ್ನು ಅವರ ಜಾತಿ, ಧರ್ಮ, ಭಾಷೆ ಅಥವಾ ಲಿಂಗದ ಆಧಾರದ ಮೇಲೆ ನಿರ್ಧರಿಸಲಾಗುವುದಿಲ್ಲ, ಆದರೆ ಅವರ ಸದ್ಗುಣಗಳಿಂದ ನಿರ್ಧರಿಸಲಾಗುತ್ತದೆ ಎಂದರು. ಸಮಾಜದ ಉನ್ನತಿಗೆ ಮಹಿಳೆಯರು ಕೊಡುಗೆ ನೀಡಬೇಕೆಂದು ಅವರು ಒತ್ತಾಯಿಸಿದರು.

****************

ಹೊಸ ಆದಾಯ ತೆರಿಗೆ ಮಸೂದೆಯ ಕುರಿತಾದ ಲೋಕಸಭೆಯ ಆಯ್ಕೆ ಸಮಿತಿಯು, ನವದೆಹಲಿಯ ಸಂಸತ್ ಭವನದಲ್ಲಿ ಇಂದು ಸಭೆ ನಡೆಸಿತು.

ಮೌಖಿಕ ಸಾಕ್ಷ್ಯವನ್ನು ದಾಖಲಿಸಲು ಸಮಿತಿಯು ಅರ್ನ್ಸ್ಟ್ ಮತ್ತು ಯಂಗ್ ಜೊತೆಗೆ ಭಾರತೀಯ ಚಾರ್ಟರ್ಡ್ ಅಕೌಂಟೆಂಟ್ಸ್ ಸಂಸ್ಥೆಯ ಪ್ರತಿನಿಧಿಗಳನ್ನು ಸಮನ್ಸ್ ಮಾಡಿದೆ.

****************

ಉತ್ತರ ಪ್ರದೇಶದ ಲಖನೌದ ಭಾರತರತ್ನ ಅಟಲ್ ಬಿಹಾರಿ ವಾಜಪೇಯಿ - ಏಕಾನಾ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳೆಯರ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ಯು.ಪಿ ವಾರಿಯರ್ಸ್ ತಂಡವು ಮುಂಬೈ ಇಂಡಿಯನ್ಸ್ ಮಹಿಳಾ ತಂಡದ ವಿರುದ್ಧ ಕಣಕ್ಕಿಳಿಯಲಿದೆ.

ಟಾಸ್ ಗೆದ್ದ ಮುಂಬೈ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

****************

ಇಂಡಿಯನ್ ಸೂಪರ್ ಲೀಗ್ - ಐಎಸ್‌ಎಲ್ ಫುಟ್ಬಾಲ್ ಪಂದ್ಯದಲ್ಲಿ ಇಂದು ಹೈದರಾಬಾದ್ ಫುಟ್ಬಾಲ್ ಕ್ಲಬ್ ಮತ್ತು ಪಂಜಾಬ್ ಫುಟ್ಬಾಲ್ ಕ್ಲಬ್ ತಂಡಗಳ ಮುಖಾಮುಖಿಯಾಗಲಿವೆ.

*********ಮುಕ್ತಾಯ*******